## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸಲಾಗುತ್ತಿರುವ "ಶ್ರೀ ಶಹಜೀರಾಜೇ ಸಮೃದ್ಧಿ" ಯೋಜನೆಯ ಮಾರ್ಗಸೂಚಿಗಳನ್ನು ರೂಪಿಸುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 527 ಬಿಎಂಎಸ್ 2015, ದಿನಾಂಕ:03.12.2015
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆ ಸಂಖ್ಯೆ:ಕ.ಮ.ಸ.ಅ.ನಿ.ನಿ/ಸಿಆರ್-35/22-23 ದಿನಾಂಕ:14.09.2022

*********

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆದೇಶದಲ್ಲಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯುಕ್ತಿಕ ಸಾಲ ಯೋಜನೆಯಡಿ ಹಿಂದುಳಿದ ವರ್ಗಗಳ ಜನರು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳಲ್ಲಿ ಶೇ.15ರ ಸಹಾಯಧನದೊಂದಿಗೆ ಗರಿಷ್ಠ ರೂ.2.00 ಲಕ್ಷಗಳ ಸಾಲ, ಸೌಲಭ್ಯ ನೀಡಲು ಈ ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ಇವರು ಮೊದಲನೇ ನಿರ್ದೇಶಕ ಮಂಡಳಿ ಸಭೆಯಲ್ಲಿ ಚರ್ಚಿಸಿ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಲ್ಲಿ ಚಾಲ್ತಿಯಲ್ಲಿರುವಂತೆ ಸದರಿ ನಿಗಮಕ್ಕೂ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಗಳಿಗೆ ಸಂಬಂಧಪಟ್ಟಂತೆ ಸಾಮಾನ್ಯ ಮಾರ್ಗಸೂಚಿಗಳನ್ನು ಅನುಸರಿಸಿ ರಾಜ್ಯ ಸರ್ಕಾರವು ಆಯವ್ಯಯದಲ್ಲಿ ಒದಗಿಸುವ ಅನುದಾನದಿಂದ ಪ್ರವರ್ಗ 3-ಬಿ ಅಡಿಯಲ್ಲಿ 2(ಎ) ರಿಂದ 2(ಎಫ್) ವರೆಗೆ ಬರುವ ಸಮುದಾಯಗಳಿಗೆ ಸೇರಿದ ಜನರು ಸ್ವಯಂ ಉದ್ಯೋಗಕ್ಕಾಗಿ ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳಿಗೆ ಸಾಲ ಮತ್ತು ಸಹಾಯ ಧನವನ್ನು ಒದಗಿಸುವ ಕಾರ್ಯಕ್ರಮದ ಮಾರ್ಗಸೂಚಿಗಳನ್ನು ರಚಿಸಿ "ಶ್ರೀ ಶಹಜೀರಾಜೇ ಸಮೃದ್ಧಿ" (ಎಸ್.ಎಸ್ .ಆರ್.ಎಸ್.ವೈ) ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 683 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:28-11-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಅನುಷ್ಠಾನಗೊಳಿಸಿರುವ ಚೈತನ್ಯ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯ ಮಾರ್ಗಸೂಚಿಗಳಂತೆ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತದಲ್ಲಿಯೂ ಸದರಿ ಮಾರ್ಗಸೂಚಿಗಳನ್ನು ಅನುಸರಿಸಿ ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ (ಎಸ್.ಎಸ್.ಆರ್.ಎಸ್.ವೈ) ಯನ್ನು ಈ ಕೆಳಕಂಡ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಆದೇಶಿಸಿದೆ.

28/11/22

....2

## "ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ (ಎಸ್.ಎಸ್.ಆರ್.ಎಸ್.ವೈ) ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ ಯೋಜನೆಯ ಮಾರ್ಗಸೂಚಿಗಳು:

ಪ್ರಸ್ತಾವನೆ:-

1. **ಯೋಜನೆ ಉದ್ದೇಶ:-** ಹಿಂದುಳಿದ ವರ್ಗಗಳ ಪ್ರವರ್ಗ 3-ಬಿ ಅಡಿಯಲ್ಲಿ 2(ಎ) ರಿಂದ 2(ಎಫ್) ವರೆಗೆ ಬರುವ ಜನರು ಸ್ವಯಂ ಉದ್ಯೋಗಕ್ಕೆ ವ್ಯಾಪಾರ, ಕೈಗಾರಿಕೆ, ಸಾರಿಗೆ ಮತ್ತು ಸೇವಾ ವಲಯ, ಸಾಂಪ್ರದಾಯಿಕ ವೃತ್ತಿಗಳು ಹಾಗು ವೃತ್ತಿಕಸಬುದಾರರಿಗೆ ಆರ್ಥಿಕ ಚಟುವಟಿಕೆ ಕೈಗೊಳ್ಳಲು ರಿಯಾಯಿತಿ ಬಡ್ಡಿದರದಲ್ಲಿ ಸಾಲ ಮತ್ತು ಸಹಾಯಧನದ ನೆರವು ನೀಡುವುದು.

2. **ಈ ಯೋಜನೆಯಲ್ಲಿ ಪ್ರಯೋಜನ ಪಡೆಯಲು ಇರಬೇಕಾದ ಅರ್ಹತೆಗಳು:-**

i. ಈ ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಅಭ್ಯರ್ಥಿಯು ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ 30.03.2002ರ ರಲ್ಲಿ ಗುರುತಿಸಲಾಗಿರುವ ಹಿಂದುಳಿದ ವರ್ಗಗಳ ಪ್ರವರ್ಗ 3-ಬಿ ಅಡಿಯಲ್ಲಿ 2(ಎ) ರಿಂದ 2(ಎಫ್) ವರೆಗೆ ಬರುವ ಸರ್ಕಾರದ ಆದೇಶದಲ್ಲಿ ಗುರ್ತಿಸಿದ ಜಾತಿಗೆ ಸೇರಿದವರಾಗಿರಬೇಕು.
ii. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದವರಾದರೆ ರೂ.98,000/-ಗಳ ಹಾಗೂ ನಗರ ಪ್ರದೇಶದವರಿಗೆ ರೂ.1,20,000/-ಗಳು ಮೀರಿರಬಾರದು.
iii. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
iv. ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 55 ವರ್ಷಗಳ ಮಿತಿಯೊಳಗಿರಬೇಕು.
v. ಈ ಹಿಂದೆ ಸರ್ಕಾರದ/ಇತರೆ ನಿಗಮದ ಬೇರೆ ಯಾವುದಾದರೂ ಯೋಜನೆಗಳಲ್ಲಿ ಸಾಲ ಅಥವಾ ಇತರೆ ಆರ್ಥಿಕ ಸವಲತ್ತು ಪಡೆದಿರಬಾರದು.
vi. ಮಹಿಳೆಯರಿಗೆ ಈ ಯೋಜನೆಯಲ್ಲಿ ಶೇ.33ರಷ್ಟು ಮೀಸಲು ನಿಗದಿಪಡಿಸಿದೆ.
vii. ಅಂಗವಿಕಲರಿಗೆ ಈ ಯೋಜನೆಯಲ್ಲಿ ಶೇ.5ರಷ್ಟು ಮೀಸಲು ನಿಗದಿಪಡಿಸಿದೆ.
viii. ಈ ಯೋಜನೆಯಲ್ಲಿ ಸಾಲ ಪಡೆಯ ಬಯಸುವ ಅರ್ಜಿದಾರರು ಕೈಗೊಳ್ಳುವ ಆರ್ಥಿಕ ಚಟುವಟಿಕೆ ಬಗ್ಗೆ ಪರಿಜ್ಞಾನ/ತರಬೇತಿ ಹೊಂದಿರಬೇಕು ಹಾಗೂ ಆರ್ಥಿಕ ಚಟುವಟಿಕೆಯನ್ನು ನಿರ್ವಹಿಸಬೇಕು.
ix. ಒಂದು ಕುಟುಂಬದ ಒಬ್ಬ ಸದಸ್ಯರಿಗೆ ಮಾತ್ರ ಈ ಯೋಜನೆಯಡಿ ಸೌಲಭ್ಯ ಒದಗಿಸಲಾಗುವುದು.
x. ಈ ಯೋಜನೆಯಲ್ಲಿ ಒಬ್ಬ ವ್ಯಕ್ತಿ ಅಥವಾ ಸ್ವ-ಸಹಾಯ ಗುಂಪುಗಳು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳಿಗೆ ಸೌಲಭ್ಯ ಒದಗಿಸುವುದು.
xi. ಈ ಯೋಜನೆಯಡಿ ಸೌಲಭ್ಯ ಪಡೆಯಬಯಸುವ ಅರ್ಜಿದಾರರು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಖಾತೆಯನ್ನು ಕಡ್ಡಾಯವಾಗಿ ಹೊಂದಿರಬೇಕು.

3. **ಘಟಕ ವೆಚ್ಚ- ಸಾಲ ಹಾಗೂ ಸಹಾಯಧನ:-**

**ವೈಯಕ್ತಿಕ ಸಾಲ:** ಅರ್ಜಿದಾರರು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳಲ್ಲಿ ಶೇ.15 ರಷ್ಟು ಸಹಾಯಧನದೊಂದಿಗೆ ಗರಿಷ್ಠ ರೂ.2.00 ಲಕ್ಷಗಳ ಸಾಲ/ ಸೌಲಭ್ಯ ನೀಡುವುದು.

1. ಸದರಿ ಯೋಜನೆಯ ಘಟಕ ವೆಚ್ಚವನ್ನು ರೂ.2.00 ಲಕ್ಷಗಳಿಗೆ ನಿಗಧಿಗೊಳಿಸಲಾಗಿದೆ.
2. ಈ ಯೋಜನೆಯಡಿ ರೂ.50,000/-ಗಳವರೆಗಿನ ಘಟಕ ವೆಚ್ಚದ ಆರ್ಥಿಕ ಚಟುವಟಿಕೆಗಳಿಗೆ ಶೇ.30ರಷ್ಟು ಗರಿಷ್ಠ - ರೂ.10,000/-ಗಳ ಸಹಾಯಧನವನ್ನು ಹಾಗೂ ಉಳಿಕೆ ಶೇ.70ರಷ್ಟು ಗರಿಷ್ಟ ರೂ.40,000/-ಗಳನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡುವುದು.
3. ರೂ. 50,001/- ರಿಂದ ರೂ.1,00,000/-ಗಳವರೆಗಿನ ಘಟಕ ವೆಚ್ಚದ ಆರ್ಥಿಕ ಚಟುವಟಿಕೆಗಳಿಗೆ ಶೇ.20ರಷ್ಟು ಗರಿಷ್ಠ ರೂ.20,000/-ಗಳ ಸಹಾಯಧನ, ಉಳಿಕೆ ಶೇ.80ರಷ್ಟು ಗರಿಷ್ಠ ರೂ.80,000/-ಗಳು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡುವುದು.

....3